**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2016-17ನೇ ಸಾಲಿನ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ನಿರ್ವಹಣೆಯ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:25.07.2013
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012 ದಿನಾಂಕ:26.02.2014
3. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:18.07.2014
4. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2) ದಿನಾಂಕ:27.11.2014
5. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 73 ಜಿಪಸ 2015, ದಿನಾಂಕ:06-10-2015.
6. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2016, ದಿನಾಂಕ:18-05-2016.
7. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ:ರಾಗ್ರಾಸಂ:ನಿ:ಆ.ಶಾ:ಇತರೆ/2017-18/435 ದಿನಾಂಕ:11.10.2017

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಎಂಬ ನೂತನ ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ. ಸದ್ಯ ಸದರಿ ಯೋಜನೆಯನ್ನು ಪಂಚಾಯತಿ ಸಶಕ್ತೀಕರಣ ಯೋಜನೆ ಎಂಬ ಹೆಸರಿನಿಂದ ಕರೆಯಲಾಗುತ್ತಿದೆ. ಮೇಲೆ ಓದಲಾದ ಉಲ್ಲೇಖ(1)ರಲ್ಲಿನ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಪಂಚಾಯತಿ ರಾಜ್ ವ್ಯವಸ್ಥೆಗೆ ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕವಾಗಿ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಸ್ಥಳೀಯವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿರುವ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಜಿಲ್ಲಾ ಪಂಚಾಯತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳನ್ನು ತಲಾ ರೂ.1.50 ಕೋಟಿಗಳಂತೆ ಒಟ್ಟಾರೆ ರೂ.45.00 ಕೋಟಿಗಳ ವೆಚ್ಚದಲ್ಲಿ ಆಯಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೇಲ್ವಿಚಾರಣೆಗಳಲ್ಲಿ ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ಮೂಲಕ ರಚಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಷಯಗಳಿಗೆ ಸಂಬಂಧಿಸಿದಂತೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ಬಳಸಿಕೊಳ್ಳಬೇಕಾಗಿರುತ್ತದೆ. ಜಿಲ್ಲಾ ಪಂಚಾಯತ್‌ಗಳು ಮತ್ತು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ಜಂಟಿಯಾಗಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳನ್ನು ನಿರ್ವಹಿಸಬೇಕಾಗಿರುತ್ತದೆ.

"ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ"ದ ಕಟ್ಟಡಗಳ ಮಾಲೀಕತ್ವ ಹಾಗೂ ವಾರ್ಷಿಕ ನಿರ್ವಹಣೆಯ ಜವಾಬ್ದಾರಿಯನ್ನು ಸಂಬಂಧಿಸಿದ ಆಯಾ ಜಿಲ್ಲಾ ಪಂಚಾಯತ್‌ಗಳಿಗೆ ವಹಿಸಬೇಕಾಗಿರುತ್ತದೆ. ಅದೇ ರೀತಿ "ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ"ಗಳಲ್ಲಿ ಆಯೋಜಿಸಬೇಕಾಗಿರುವ ಎಲ್ಲಾ ತರಬೇತಿ ಚಟುವಟಿಕೆಗಳ ಮೇಲ್ವಿಚಾರಣೆ, ಉಸ್ತುವಾರಿ ಹಾಗೂ ಅಲ್ಲಿಯ ಬೋಧಕ/ಸಿಬ್ಬಂದಿಯವರ ಭರ್ತಿಯ ಜವಾಬ್ದಾರಿಯನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ವಹಿಸಬೇಕಾಗಿದೆ. ಈಗಾಗಲೇ ರಾಜ್ಯದ ಮತ್ತು ಬೆಂಗಳೂರು ನಗರ ಸದ್ಯಕ್ಕೆ ದಾವಣಗೆರೆ, ಚಿತ್ರದುರ್ಗ, ಬಳ್ಳಾರಿ, ಬೀದರ, ಮೈಸೂರು, ವಿಜಯಪುರ, ಹಾವೇರಿ, ಚಾಮರಾಜನಗರ, ರಾಮನಗರ, ಚಿಕ್ಕಮಗಳೂರು, ಹಾಸನ, ಶಿವಮೊಗ್ಗ ಮತ್ತು ಬೆಂಗಳೂರು ನಗರ ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳ ಕಾಮಗಾರಿಗಳು ಪೂರ್ಣಗೊಂಡಿದ್ದು, ಅವುಗಳನ್ನು ಜಿಲ್ಲಾ ಪಂಚಾಯಿತಿಗಳು ಕೂಡಲೇ ವಶಕ್ಕೆ ತೆಗೆದುಕೊಂಡು, ತರಬೇತಿಗಳನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ವತಿಯಿಂದ ನಡೆಸಲು ಅನುವು ಮಾಡಿಕೊಡಲು ಸರ್ಕಾರವು ನಿರ್ಧರಿಸಿದೆ. ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 141 ಜಿಪಸ 2014, ಬೆಂಗಳೂರು, ದಿನಾಂಕ:12-12-2017.**

ಮೇಲಿನ ಎಲ್ಲಾ ಪ್ರಸ್ತಾವನೆಗಳನ್ನು ಗಣನೆಗೆ ತೆಗೆದುಕೊಂಡು, "ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆ(ಪಿ.ಎಸ್.ಎ)/ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯಡಿ "ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳ ಸಾಮರ್ಥ್ಯಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವ್ಯವಸ್ಥೆಯ ಅನುಷ್ಠಾನಾಧಿಕಾರಿಗಳಿಗೆ ಪುನಶ್ಚೇತನ ತರಬೇತಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ವ್ಯವಸ್ಥೆಯ ಸದೃಢೀಕರಣ ಸಂಬಂಧದ ಕಾರ್ಯಾಗಾರ ಮತ್ತು ಸಂಪರ್ಕ ಸಭೆಗಳನ್ನು ನಡೆಸಲು ಜಿಲ್ಲಾ ಪಂಚಾಯತಿ ಕೇಂದ್ರಗಳ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳ ಮಾಲೀಕತ್ವ ಹಾಗೂ ವಾರ್ಷಿಕ ನಿರ್ವಹಣೆಯ ಜವಾಬ್ದಾರಿಯನ್ನು ಸಂಬಂಧಿಸಿದ ಆಯಾ ಜಿಲ್ಲಾ ಪಂಚಾಯತ್‌ಗಳಿಗೆ ವಹಿಸಲಾಗಿದೆ. ಅದೇ ರೀತಿ "ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ"ಗಳಲ್ಲಿ ಆಯೋಜಿಸಬೇಕಾಗಿರುವ ಎಲ್ಲಾ ತರಬೇತಿ ಚಟುವಟಿಕೆಗಳ ಮೇಲ್ವಿಚಾರಣೆ, ಉಸ್ತುವಾರಿ ಹಾಗೂ ಅಲ್ಲಿಯ ಬೋಧಕ/ಸಿಬ್ಬಂದಿಯವರ ಭರ್ತಿಯ ಜವಾಬ್ದಾರಿಯನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ವಹಿಸಲಾಗಿದೆ. ಈಗಾಗಲೇ ರಾಜ್ಯದ ಹಲವು ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳ ಕಾಮಗಾರಿಗಳು ಪೂರ್ಣಗೊಂಡಿದ್ದು, ಅವುಗಳನ್ನು ಜಿಲ್ಲಾ ಪಂಚಾಯಿತಿಗಳು ಕೂಡಲೇ ವಶಕ್ಕೆ ತೆಗೆದುಕೊಂಡು, ತರಬೇತಿಗಳನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ವತಿಯಿಂದ ನಡೆಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

P. Devadas 12/12/2017

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

RE 13.12.17

ಗೆ,

1. ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತಿಗಳು

5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು
6. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.